ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 27-04-2016

## ಪತ್ರಿಕಾ ಪ್ರಕಟಣೆ

## ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2016-17 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ನಂತರದ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಅರ್ಹರಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದ್ದು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ದಿನಾಂಕ 10-05-2016 ರೊಳಗಾಗಿ ಸಲ್ಲಿಸಬೇಕು. ಆನ್‌ಲೈನ್‌ಮೂಲಕ ಅರ್ಜಿಗಳನ್ನು **welfareofdisabled.kar.nic.in** ವೆಬ್‌ಸೈಟ್‌ನಲ್ಲಿನ ಆನ್‌ಲೈನ್ ಅಪ್ಲಿಕೇಷನ್ ಲಿಂಕ್‌ನಲ್ಲಿ **Online Application Link Talking Laptop** ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ರವರನ್ನು ದೂರವಾಣಿ ಸಂಖ್ಯೆ 080-22866046/22860907 ರಲ್ಲಿ ಹಾಗೂ ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

ಕವನ/ಕೆಎಂ

## ಸಂಸದೀಯ ಕಾರ್ಯದರ್ಶಿ ಪ್ರವಾಸ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಕಂದಾಯ ಸಚಿವರ ಸಂಸದೀಯ ಕಾರ್ಯದರ್ಶಿ ಶ್ರೀ ಪ್ರಮೋದ್ ಮಧ್ವರಾಜ್ ಅವರು ಏಪ್ರಿಲ್ 29 ಮತ್ತು 30 ರಂದು ಕಾರವಾರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಸಾರ್ವಜನಿಕ ಅಹವಾಲು ಸ್ವೀಕರಿಸುವರು ಹಾಗೂ ಜಿಲ್ಲೆಯ ಕಂದಾಯ ಇಲಾಖೆಗೆ ಸಂಬಂಧಿಸಿದ ವಿಷಯಗಳ ಪ್ರಗತಿ ಪರಿಶೀಲನೆ ನಡೆಸುವರು.

ಮಮತ:ಪೂರ್ಣಿಮಾ:ಜಿಪಿಆರ್

## ಪಿಂಚಣಿ ಯೋಜನೆಗಳಿಗೆ ಆಧಾರ್ ಕಡ್ಡಾಯ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಸಾಮಾಜಿಕ ಭದ್ರತಾ ಮತ್ತು ಪಿಂಚಣಿ ಯೋಜನೆಗಳಾದ ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ವೇತನ, ನಿರ್ಗತಿಕ ವಿಧವಾ ವೇತನ, ಅಂಗವಿಕಲ ವೇತನ, ಮನಸ್ವಿನಿ ಹಾಗೂ ಮೈತ್ರಿ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರುವ ಪ್ರತಿಯೊಬ್ಬ ಫಲಾನುಭವಿಯು ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಮೇ-15 2016 ತಾರೀಖಿನೊಳಗಾಗಿ ಸಲ್ಲಿಸತಕ್ಕದ್ದು.

ಫಲಾನುಭವಿಗಳು ಆಧಾರ್ ಸಂಖ್ಯೆ ಸಂಗ್ರಹಣೆಗಾಗಿ ಸಂಬಂಧಿಸಿದ ರಾಜಸ್ವ ನಿರೀಕ್ಷಕರು/ಗ್ರಾಮ ಲೆಕ್ಕಿಗರು/ಗ್ರಾಮ ಸಹಾಯಕರುಗಳು ಗ್ರಾಮಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾಮಾಜಿಕ ಭದ್ರತೆ ಮತ್ತು ಪಿಂಚಣಿಯ ಮಂಜೂರಾತಿ ಆದೇಶ ಸಂಖ್ಯೆ/ಪಿ.ಪಿ.ಓ.ಐಡಿ ಜೊತೆಗೆ ಆಧಾರ್ ಸಂಖ್ಯೆಯನ್ನು ನೀಡಬೇಕು ಅಥವಾ ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಸಹಾಯಕರು, ಗ್ರಾಮ ಲೆಕ್ಕಿಗರು, ಕಂದಾಯ ನಿರೀಕ್ಷಕರ ಮುಖಾಂತರ (ಹೋಬಳಿ ಮಟ್ಟದಲ್ಲಿ ಅಟಲ್ ಜೀ ಜನಸ್ನೇಹಿ ಕೇಂದ್ರಗಳು) ಹಾಗೂ ತಾಲ್ಲೂಕು ಕೇಂದ್ರ/ನಗರ ಪ್ರದೇಶಗಳಲ್ಲಿ ತಾಲ್ಲೂಕು ಕಚೇರಿಗಳನ್ನು ಸಂಪರ್ಕಿಸಿ ಆಧಾರ್ ಸಂಖ್ಯೆಯ ಮಾಹಿತಿಯನ್ನು ನೀಡಬಹುದಾಗಿದೆ.

ಆಧಾರ್ ಸಂಖ್ಯೆ ಪಡೆಯಲು ಈಗಾಗಲೇ ಅರ್ಜಿ ಸಲ್ಲಿಸಿದವರು ಆಧಾರ್ ಸಂಖ್ಯೆ ದೊರೆತಿಲ್ಲವಾದಲ್ಲಿ, 28 ಅಂಕಿಯ EID (Aadhar Enrolment No) ಸಂಖ್ಯೆ ನೀಡಬಹುದಾಗಿರುತ್ತದೆ. ನಿಮ್ಮ EID ಸಂಖ್ಯೆಗೆ ಯಶಸ್ವಿಯಾಗಿ ಆಧಾರ್ ಸಂಖ್ಯೆ ಲಭ್ಯವಾದಲ್ಲಿ ಇಲಾಖೆ ವತಿಯಿಂದಲೇ ಅದನ್ನು ಸೇರಿಸಲಾಗುವುದು ಹಾಗೂ ಆಧಾರ್ ಸಂಖ್ಯೆಯನ್ನು ಪಡೆದುಕೊಳ್ಳಲು ಆಧಾರ್ ನೋಂದಣಿ ಕೇಂದ್ರಗಳು ಎಂದರೆ ಹೋಬಳಿ ಮಟ್ಟದಲ್ಲಿ ಇರುವ ಅಟಲ್‌ಜೀ ಜನಸ್ನೇಹಿ ಕೇಂದ್ರಗಳಲ್ಲಿ, ನಗರ ಪ್ರದೇಶಗಳ ಕರ್ನಾಟಕ ಒನ್/ಬೆಂಗಳೂರು ಒನ್ ಹಾಗೂ ಇನ್ನಿತರೆ ನೊಂದಣಿ ಕೇಂದ್ರಗಳನ್ನು ಸಂಪರ್ಕಿಸಬಹುದಾಗಿರುತ್ತದೆ.

ಈ ವಿಷಯದ ಬಗ್ಗೆ ದೂರುಗಳು ಏನಾದರೂ ಇದ್ದಲ್ಲಿ ಸಂಬಂಧಿಸಿದ ತಾಲ್ಲೂಕು ಕಚೇರಿ/ಜಿಲ್ಲಾಧಿಕಾರಿಗಳ ಕಚೇರಿ ಅಥವಾ ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ ಬೆಂಗಳೂರು, ಅನ್ನು ಸಂಪರ್ಕಿಸಬಹುದಾಗಿರುತ್ತದೆ ಎಂದು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಮಮತ:ಪೂರ್ಣಿಮಾ:ಜಿಪಿಆರ್

## ಮಹಿಳಾ ಶುಶ್ರೂಷಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕ ಸೇವಾ ಆಯೋಗವು ದಿನಾಂಕ :21-02-2015 ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ್ದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಮಹಿಳಾ ಶುಶ್ರೂಷಕಿಯರ 03 ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಏಪ್ರಿಲ್ 23 2016 ರಂದು ಆಯೋಗದ ಅಂತರ್ಜಾಲ ತಾಣ "http://kpsc.kar.nic.in" ದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ. ಆಕ್ಷೇಪಣೆಗಳನ್ನು ಸಲ್ಲಿಸುವ ಅಭ್ಯರ್ಥಿಗಳು ಈ ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗೆ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು. ಮೇ 7 ರ ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಮಮತ:ಪೂರ್ಣಿಮಾ:ಜಿಪಿಆರ್

# ಸಿ.ಇ.ಟಿ. ಪರೀಕ್ಷೆ ಫಲಿತಾಂಶಕ್ಕೆ
# ಮುನ್ನ ದ್ವಿತೀಯ ಪಿ.ಯು.ಸಿ. ಫಲಿತಾಂಶ ಪ್ರಕಟ : ಸಚಿವ ಕಿಮ್ಮನೆ ರತ್ನಾಕರ

ಬೆಂಗಳೂರು, ಏಪ್ರಿಲ್ 27 (ಕರ್ನಾಟಕ ವಾರ್ತೆ)

ವೃತ್ತಿಪರ ಕೋರ್ಸುಗಳ ಸಾಮಾನ್ಯ ಪರೀಕ್ಷೆ ಫಲಿತಾಂಶಕ್ಕಿಂತ ಮುನ್ನ ದ್ವಿತೀಯ ಪಿ.ಯು.ಸಿ. ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಲಾಗುವುದು ಎಂದು ಪ್ರಾಥಮಿಕ ಹಾಗೂ ಪ್ರೌಢ ಸಚಿವ ಕಿಮ್ಮನೆ ರತ್ನಾಕರ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಪದವಿ ಪೂರ್ವ ಶಿಕ್ಷಣ ಮಂಡಳಿಯಲ್ಲಿನ ಆಡಳಿತ ಶಾಖೆ ಹಾಗೂ ಪರೀಕ್ಷಾ ವಿಭಾಗಗಳನ್ನು ಪ್ರತ್ಯೇಕಗೊಳಿಸುವ ಚಿಂತನೆ ನಡೆದಿದ್ದು, ಈ ಬಗ್ಗೆ ಇಲಾಖಾ ಮುಖ್ಯಸ್ಥರಿಗೆ ವರದಿ ನೀಡುವಂತೆ ಕೋರಲಾಗಿದ್ದು, ಪಿ.ಯು.ಸಿ. ಪರೀಕ್ಷಾ ಪದ್ದತಿಯಲ್ಲಿ ಆನ್‌ಲೈನ್ ವ್ಯವಸ್ಥೆ ಜಾರಿಗೆ ತರಬೇಕು ಎಂಬುದು ಸರ್ಕಾರದ ಚಿಂತನೆಯಲ್ಲಿದೆ. ಇದರ ಸಾಧಕ ಬಾಧಕಗಳ ಬಗ್ಗೆ ತಿಳಿಯಲು ಸಮಿತಿ ರಚಿಸಿ ಸಮಿತಿ ವರದಿಯ ಆಧಾರದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದೆಂದರು.

ಪ್ರಸ್ತುತ ಶೈಕ್ಷಣಿಕ ವರ್ಷದಲ್ಲಿ 12,200 ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದ್ದು ಮುಂದಿನ ಶೈಕ್ಷಣಿಕ ವರ್ಷದಲ್ಲಿ 17 ಸಾವಿರ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುವುದು. ಈ ಸಂಬಂಧ ಇಲಾಖೆ ಈಗಾಗಲೇ ಹಣಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಕಾಯ್ದೆ ಅನ್ವಯ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರ ನಿಗದಿಪಡಿಸಿರುವ ಸೀಟುಗಳ ಹಂಚಿಕೆ ವಿಷಯಕ್ಕೆ ಸಂಬಂಧಿಸಿದಂತೆ ಸುಮಾರು 337 ಶಾಲೆಗಳಿಗೆ ಪ್ರವೇಶ ಕೋರಿ ವಿದ್ಯಾರ್ಥಿಗಳು ಅರ್ಜಿಗಳನ್ನು ಹಾಕಿಲ್ಲ ಇದರಿಂದ 1300 ಸೀಟುಗಳು ಲಭ್ಯವಾಗದೆ ಹಾಗೆ ಉಳಿದಿವೆ. ಬರುವ ಶೈಕ್ಷಣಿಕ ವರ್ಷದಲ್ಲಿ ಶಾಲಾ ಮಕ್ಕಳಿಗೆ ಸರಿಯಾದ ಸಮಯಕ್ಕೆ ಪಠ್ಯಪುಸ್ತಕ, ಸಮವಸ್ತ್ರ, ಶೂ ಗಳನ್ನು ವಿತರಿಸಲು ಎಲ್ಲಾ ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದರು.

ಪದವಿ ಪೂರ್ವ ಶಿಕ್ಷಣ ಮಂಡಳಿಯಿಂದ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿಲ್ಲ ಎಂದು ಸ್ಪಷ್ಟಪಡಿಸಿದ ಅವರು ಈ ವಿಷಯ ತನಿಖಾ ಹಂತದಲಿದ್ದು ವರದಿ ಬಂದ ನಂತರ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ದ್ವಿತೀಯ ಪಿ.ಯು.ಸಿ. ಗಣಿತ ಪ್ರಶ್ನೆ ಪತ್ರಿಕೆಯಲ್ಲಿ ಪಠ್ಯೇತರ ಪ್ರಶ್ನೆಗಳು ಇವೆ ಎಂಬುದು ನನ್ನ ಗಮನಕ್ಕೆ ಬಂದಿಲ್ಲ ಎಂದ ಸಚಿವರು ಮುಖ್ಯ ಮೌಲ್ಯಮಾಪಕರು ಈ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ. ಒಂದು ವೇಳೆ ಪಠ್ಯೇತರ ಪ್ರಶ್ನೆಗಳು ಇದ್ದಲ್ಲಿ ಗ್ರೇಸ್‌ಮಾರ್ಕ್ಸ್ ನೀಡಬೇಕೆ ಬೇಡವೆ ಎಂದು ತೀರ್ಮಾನಿಸಲಾಗುವುದು ಎಂದು ಪತ್ರಕರ್ತರು ಕೇಳಿದ ಪ್ರಶ್ನೆಗೆ ಸಚಿವರು ಸ್ಪಷ್ಟನೆ ನೀಡಿದರು.

ಕೆಪಿಪಿ:ಪೂರ್ಣಿಮಾ:ಜಿಪಿಆರ್